## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 106(55) |
| ಸದಸ್ಯರ ಹೆಸರು | ಶ್ರೀ ಶಿವಣ್ಣ ಬಿ.ಎಸ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.08.2026 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವರು. |
| **ಪ್ರಶ್ನೆ** | **ಉತ್ತರ** |
| (ಅ) ಬೆಂಗಳೂರಿನಲ್ಲಿ ಭಾರತದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ (Artificial Intelligence-AI) ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಯೋಜನೆಯ ಸದ್ಯದ ಪ್ರಗತಿಯ ವಿವರ ನೀಡುವುದು; | ಹೌದು, ಬೆಂಗಳೂರಿನಲ್ಲಿ ಭಾರತದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ (AI) ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿರುವುದು ನಿಜ. ಈ ಯೋಜನೆಯ ಅನುಷ್ಠಾನಕ್ಕಾಗಿ ಭೂಮಿಯನ್ನು ಗುರುತಿಸಿ ಹಂಚಿಕೆ ಮಾಡಲು ಕೋರಿ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, Metropolitan Commissioner, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (BMRDA), ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆರವರಿಗೆ ಪತ್ರಗಳನ್ನು ಬರೆಯಲಾಗಿದೆ.<br>ಕರ್ನಾಟಕ AI ವಿಶ್ವವಿದ್ಯಾಲಯದ ಕರಡು ಮಸೂದೆಯನ್ನು ಸಿದ್ಧಪಡಿಸಿದ್ದು ಪರಿಶೀಲನೆ ಹಾಗೂ ಅಭಿಪ್ರಾಯಕ್ಕಾಗಿ ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| (ಆ) ಕರ್ನಾಟಕವನ್ನು 'ಎಐ-ನೇಟಿವ್ (AI-Native) ಈ ರಾಜ್ಯವನ್ನಾಗಿ ರೂಪಿಸಲು, ಶಿಕ್ಷಣ ಸಂಸ್ಥೆಗಳು, ಉದ್ದಿಮೆ ಹಾಗೂ ಸರ್ಕಾರದ ನಡುವೆ ಸಹಯೋಗವನ್ನು ಬೆಳೆಸಲು ಮತ್ತು ಸುಧಾರಿತ ಸಂಶೋಧನೆಯನ್ನು ಉತ್ತೇಜಿಸಲು ಈ ವಿಶ್ವವಿದ್ಯಾಲಯವು ಯಾವ ರೀತಿಯ ಕಾರ್ಯಯೋಜನೆಗಳನ್ನು ಒಳಗೊಂಡಿದೆ; | ಕರ್ನಾಟಕವನ್ನು "AI-Native State" ಆಗಿ ರೂಪಿಸುವ ದೃಷ್ಟಿಕೋನವನ್ನು ಸಾಧಿಸಲು, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ & ತಂತ್ರಜ್ಞಾನ ಇಲಾಖೆಯು ಉನ್ನತ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಕರ್ನಾಟಕ AI ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಪ್ರಸ್ತಾವಿತ ವಿಶ್ವವಿದ್ಯಾಲಯವು ಶೈಕ್ಷಣಿಕ ಸಂಸ್ಥೆಗಳು, ಕೈಗಾರಿಕೆ, ಸ್ಟಾರ್ಟ್‌ಅಪ್‌ಗಳು ಮತ್ತು ಸರ್ಕಾರಕ್ಕೆ AI ಶಿಕ್ಷಣ, ಸಂಶೋಧನೆ, ನಾವೀನ್ಯತೆ, ಉದ್ಯಮಶೀಲತೆ, ಕೌಶಲಾಭಿವೃದ್ಧಿ ಹಾಗೂ ಕೈಗಾರಿಕೆ–ಶೈಕ್ಷಣಿಕ ಸಹಯೋಗವನ್ನು ಉತ್ತೇಜಿಸಲು ಸಾಮಾನ್ಯ ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ.<br>ರಾಜ್ಯದ AI ಸಂಶೋಧನೆ ಮತ್ತು ನಾವೀನ್ಯತಾ ಪರಿಸರ |

| | |
|---|---|
| | ವ್ಯವಸ್ಥೆಯನ್ನು ಬಲಪಡಿಸಲು, ಸರ್ಕಾರವು ಈಗಾಗಲೇ ಕೆಳಗಿನ ಶ್ರೇಷ್ಠತಾ ಕೇಂದ್ರಗಳನ್ನು ಸ್ಥಾಪಿಸಿ ಬೆಂಬಲಿಸುತ್ತಿದೆ:-<br><br>• **ಬೆಂಗಳೂರಿನ IIT Alumni Centreನಲ್ಲಿ ಕೃತಕ ಬುದ್ಧಿಮತ್ತೆಯ ಶ್ರೇಷ್ಠತಾ ಕೇಂದ್ರ** – AI ಸಂಶೋಧನೆ, ನಾವೀನ್ಯತೆ, ಸ್ಟಾರ್ಟ್‌ಅಪ್‌ಗಳು ಮತ್ತು ಕೈಗಾರಿಕಾ ಸಹಯೋಗವನ್ನು ಉತ್ತೇಜಿಸುವ ಸಲುವಾಗಿ ಸ್ಥಾಪಿಸಲಾಗಿದೆ.<br>• **Centre for Applied AI for Tech Solutions (CATS)** – ಸಹಯೋಗಾತ್ಮಕ ಸಂಶೋಧನೆಯ ಮೂಲಕ ಆಡಳಿತ ಮತ್ತು ಕೈಗಾರಿಕೆಗಾಗಿ AI ಆಧಾರಿತ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ಸ್ಥಾಪಿಸಲಾಗಿದೆ.<br>• **IIIT ಧಾರವಾಡದಲ್ಲಿನ Quantum AI & Quantum Computing ಶ್ರೇಷ್ಠತಾ ಕೇಂದ್ರ** – ಕ್ವಾಂಟಮ್ AI, ಕ್ವಾಂಟಮ್ ಕಂಪ್ಯೂಟಿಂಗ್, ಸ್ಟಾರ್ಟ್‌ಅಪ್ ಇನ್‌ಕ್ಯುಬೇಶನ್ ಮತ್ತು ಉನ್ನತ ಮಟ್ಟದ ಕೌಶಲಾಭಿವೃದ್ಧಿಯ ಸಂಶೋಧನೆಯನ್ನು ಮುಂದುವರಿಸಲು ಸ್ಥಾಪಿಸಲಾಗಿದೆ.<br>• **IIIT ರಾಯಚೂರಿನ Artificial Intelligence ಶ್ರೇಷ್ಠತಾ ಕೇಂದ್ರ**– ವಿಶೇಷವಾಗಿ ಉತ್ತರ ಕರ್ನಾಟಕ ಮತ್ತು ಬೆಂಗಳೂರು ಹೊರಗಿನ ಪ್ರದೇಶಗಳಿಗಾಗಿ AI ಸಂಶೋಧನೆ, ನಾವೀನ್ಯತೆ, ಉದ್ಯಮಶೀಲತೆ ಮತ್ತು ಕೌಶಲಾಭಿವೃದ್ಧಿಯನ್ನು ಬಲಪಡಿಸಲು ಸ್ಥಾಪಿಸಲಾಗಿದೆ. ಪ್ರಸ್ತಾವಿತ ಕರ್ನಾಟಕ AI ವಿಶ್ವವಿದ್ಯಾಲಯವು ಈ ಉಪಕ್ರಮಗಳ ಮೇಲೆ ನಿರ್ಮಾಣಗೊಂಡು ಶಿಕ್ಷಣ, ಉನ್ನತ ಮಟ್ಟದ ಸಂಶೋಧನೆ, ನಾವೀನ್ಯತೆ, ಇನ್‌ಕ್ಯುಬೇಶನ್ ಮತ್ತು ಕೈಗಾರಿಕಾ ಪಾಲುದಾರಿಕೆಯನ್ನು ಒಂದೇ ಸಾಂಸ್ಥಿಕ ಚೌಕಟ್ಟಿನಡಿ ಸಂಯೋಜಿಸಲಿದೆ. ಇದರ ಮೂಲಕ ಜಾಗತಿಕವಾಗಿ ಸ್ಪರ್ಧಾತ್ಮಕ AI ಪರಿಸರ ವ್ಯವಸ್ಥೆಯನ್ನು ನಿರ್ಮಿಸಿ, ರಾಜ್ಯಕ್ಕೆ ಅಗತ್ಯವಿರುವ ನುರಿತ AI ವೃತ್ತಿಪರರನ್ನು ಅಭಿವೃದ್ಧಿಪಡಿಸುವ ಗುರಿಯನ್ನು ಹೊಂದಿದೆ. |
| (ಇ) ಸಾರ್ವಜನಿಕ ಸೇವೆಗಳ ವಿತರಣೆಯಲ್ಲಿ ಎಐ ತಂತ್ರಜ್ಞಾನವನ್ನು ಸಂಯೋಜಿಸುವ ಮೂಲಕ | ಕೃಷಿ, ಆರೋಗ್ಯ ಮತ್ತು ಆಡಳಿತದಂತಹ ಆದ್ಯತಾ ಕ್ಷೇತ್ರಗಳಲ್ಲಿ ಕೃತಕ ಬುದ್ಧಿಮತ್ತೆಯ ಬಳಕೆಯನ್ನು ಉತ್ತೇಜಿಸಲು ಸರ್ಕಾರವು ಹಲವು ಕ್ರಮಗಳನ್ನು ಕೈಗೊಂಡಿದೆ. ಎಲೆಕ್ಟ್ರಾನಿಕ್ಸ್, ಐಟಿ ಮತ್ತು ಬಿಟಿ ಇಲಾಖೆಯು Responsible Artificial |

| | |
|---|---|
| ಆಡಳಿತ ಯಂತ್ರವನ್ನು ಜನಸ್ನೇಹಿಯಾಗಿಸಲು ಹಾಗೂ ಕೃಷಿ, ಆರೋಗ್ಯ ಮತ್ತು ಸಣ್ಣ ಉದ್ಯಮಗಳ ವಲಯದಲ್ಲಿ ಕೃತಕ ಬುದ್ಧಿಮತ್ತೆ ಉಪಕರಣಗಳನ್ನು ಬಳಸಿಕೊಳ್ಳಲು ಸರ್ಕಾರ ರೂಪಿಸಿರುವ ನೀತಿಗಳೇನು; | Intelligence (AI) ಸಮಿತಿಯನ್ನು ರಚಿಸಿದ್ದು, ಸರ್ಕಾರದ ವ್ಯವಸ್ಥೆಗಳಲ್ಲಿ AIಯನ್ನು ಸುರಕ್ಷಿತ, ನೈತಿಕ ಮತ್ತು ಪಾರದರ್ಶಕವಾಗಿ ಅಳವಡಿಸಲು Responsible AI Policy, Governance Framework ಮತ್ತು Implementation Roadmap ಸಿದ್ಧಪಡಿಸಲು ಕ್ರಮ ಕೈಗೊಂಡಿದೆ.<br>ಈ ಚೌಕಟ್ಟು ಕೃಷಿ, ಆರೋಗ್ಯ, ಶಿಕ್ಷಣ, ಕಲ್ಯಾಣ ಸೇವೆಗಳ ವಿತರಣೆ ಮತ್ತು ಸಾರ್ವಜನಿಕ ಸೇವೆಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ AI ಅನ್ವಯಿಕೆಗಳನ್ನು ಜವಾಬ್ದಾರಿಯುತವಾಗಿ ಅಳವಡಿಸಲು ನೆರವಾಗಲಿದೆ. ಜೊತೆಗೆ ಪಾರದರ್ಶಕತೆ, ಹೊಣೆಗಾರಿಕೆ, ಗೌಪ್ಯತೆ ಮತ್ತು ನಾಗರಿಕರ ವಿಶ್ವಾಸವನ್ನು ಖಚಿತಪಡಿಸುವ ಉದ್ದೇಶ ಹೊಂದಿದೆ.<br>ಪ್ರಸ್ತಾವಿತ ಕರ್ನಾಟಕ AI ವಿಶ್ವವಿದ್ಯಾಲಯ, AI Hub ಮತ್ತು AI Centres of Excellenceಗಳು ಕೃಷಿ, ಆರೋಗ್ಯ ಮತ್ತು ಇತರ ಆದ್ಯತಾ ಕ್ಷೇತ್ರಗಳಿಗಾಗಿ ಸಂಶೋಧನೆ, ನಾವೀನ್ಯತೆ, ಸಾಮರ್ಥ್ಯ ನಿರ್ಮಾಣ ಮತ್ತು AI ಪರಿಹಾರಗಳ ಅಭಿವೃದ್ಧಿಯನ್ನು ಮತ್ತಷ್ಟು ಉತ್ತೇಜಿಸಲಿವೆ. |
| (ಈ) ಜಾಗತಿಕ ಮಟ್ಟದ ಈ ಮಹತ್ವಾಕಾಂಕ್ಷಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಗೂಗಲ್ (Google)ನಂತಹ ಪ್ರಮುಖ ತಂತ್ರಜ್ಞಾನ ಸಂಸ್ಥೆಗಳೊಂದಿಗೆ ಪಾಲುದಾರಿಕೆ ಅಥವಾ ತಾಂತ್ರಿಕ ಸಹಯೋಗವನ್ನು ಹೊಂದಲು ಒಪ್ಪಂದ ಮಾಡಿಕೊಳ್ಳಲಾಗಿದೆಯೇ; ಈ ವಿಶ್ವವಿದ್ಯಾಲಯದ ಸ್ಥಾಪನೆಗಾಗಿ ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಮತ್ತು ಅಂದಾಜು ವೆಚ್ಚ ಎಷ್ಟು? | ಜಾಗತಿಕ ಮಟ್ಟದ ಈ ಮಹತ್ವಾಕಾಂಕ್ಷಿ ಕೃತಕ ಬುದ್ಧಿಮತ್ತೆ (AI) ವಿಶ್ವವಿದ್ಯಾಲಯದ ಸ್ಥಾಪನೆಗಾಗಿ ಗೂಗಲ್ (Google)ನಂತಹ ಪ್ರಮುಖ ತಂತ್ರಜ್ಞಾನ ಸಂಸ್ಥೆಗಳೊಂದಿಗೆ ಪಾಲುದಾರಿಕೆ ಅಥವಾ ತಾಂತ್ರಿಕ ಸಹಯೋಗವನ್ನು ಹೊಂದಲು ಪ್ರಸ್ತುತ ಯಾವುದೇ ಒಪ್ಪಂದ ಮಾಡಿಕೊಳ್ಳಲಾಗಿಲ್ಲ. ಆದರೆ, ತಾಂತ್ರಿಕ ಸಹಯೋಗ, ಸಂಶೋಧನೆ, ಪಠ್ಯಕ್ರಮ ಅಭಿವೃದ್ಧಿ, ಕೌಶಲ್ಯಾಭಿವೃದ್ಧಿ ಮತ್ತು ನಾವೀನ್ಯತೆಗಾಗಿ ಪ್ರಮುಖ ಜಾಗತಿಕ ತಂತ್ರಜ್ಞಾನ ಕಂಪನಿಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳೊಂದಿಗೆ ಚರ್ಚೆ ನಡೆಸಲು ಸರ್ಕಾರ ಪ್ರಸ್ತಾಪಿಸಿದೆ.<br>ಕರ್ನಾಟಕ ಕೃತಕ ಬುದ್ಧಿಮತ್ತೆ ವಿಶ್ವವಿದ್ಯಾಲಯಕ್ಕೆ ಶಾಸನಬದ್ಧ ಅನುಮೋದನಾ ಪ್ರಕ್ರಿಯೆ ಪೂರ್ಣಗೊಂಡ ಕೂಡಲೇ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುವುದು.<br>ಆರಂಭಿಕ ಹಂತದಲ್ಲಿ ಕಾರ್ಯಾಚರಣೆ ಪ್ರಾರಂಭಿಸಲು, ಮಾನವ ಸಂಪನ್ಮೂಲ, ಪ್ರಾಥಮಿಕ ಕಾಮಗಾರಿಗಳು, ಪ್ರಯೋಗಾಲಯಗಳು, ಕಂಪ್ಯೂಟಿಂಗ್ ಮತ್ತು ಡೇಟಾ ಸೆಂಟರ್ ಮೂಲಸೌಕರ್ಯ, ಇನ್‌ಕ್ಯುಬೇಷನ್ ಸೌಲಭ್ಯಗಳು ಹಾಗೂ ಕರ್ನಾಟಕ AI ವಿಶ್ವವಿದ್ಯಾಲಯವನ್ನು ಸ್ಥಾಪಿಸಲು |

| | |
|---|---|
| | ಅಗತ್ಯವಿರುವ ಇತರ ಮೂಲಭೂತ ಸಾಂಸ್ಥಿಕ ಅವಶ್ಯಕತೆಗಳಿಗೆ ಬೆಂಬಲ ನೀಡಲು ರೂ.200 ಕೋಟಿಗಳ ಆರಂಭಿಕ ನಿಧಿಯನ್ನು (Corpus) ಪ್ರಸ್ತಾಪಿಸಲಾಗಿದೆ. |

(ಐಟಿಬಿಟಿ 91 ಎಲ್‌ಸಿಎಂ 2026)

(ಪ್ರಿಯಾಂಕ್ ಖರ್ಗೆ)
ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಹಾಗೂ ಇ-ಆಡಳಿತ ಸಚಿವರು.